**Bangalore**
**Regional News**
**01.04.2025 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕೊಯ್ನಾ, ಉಜ್ಜಿನಿ ಅಣೆಕಟ್ಟೆನಿಂದ ಕೃಷ್ಣಾ, ಭೀಮಾ ನದಿಗೆ ನೀರು ಬಿಡುವಂತೆ ಮಹಾರಾಷ್ಟ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ

೨. ಉತ್ತಮ ಶಿಕ್ಷಣ ವ್ಯವಸ್ಥೆಯಿಂದ ರಾಷ್ಟ್ರದ ಪ್ರಗತಿ ಸಾಧ್ಯ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

೩. ಅಗತ್ಯ ವಸ್ತುಗಳ ಬೆಲೆ ಏರಿಕೆ ; ಬೆಂಗಳೂರಿನಲ್ಲಿ ನಾಳೆ ಬಿಜೆಪಿ ಅಹೋರಾತ್ರಿ ಧರಣಿ

೪. ವೇವ್ಸ್ ಶೃಂಗಸಭೆ ; ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್‌ನಲ್ಲಿ ೭೫೦ಕ್ಕೂ ಹೆಚ್ಚು ಅಂತಿಮ ಸ್ಪರ್ಧಿಗಳು ಆಯ್ಕೆ

೫. ಐಪಿಎಲ್ ಪಂದ್ಯ ಹಿನ್ನೆಲೆ ; ಬೆಂಗಳೂರಿನಲ್ಲಿ ನಾಳೆ ಮೆಟ್ರೋ ರೈಲು ಸೇವೆ ರಾತ್ರಿ ೧೨-೩೦ ರವರೆಗೆ ವಿಸ್ತರಣೆ

**<><*<><>*><>**

ಕೊಯ್ನಾ ಹಾಗೂ ಉಜ್ಜಿನಿ ಅಣೆಕಟ್ಟೆನಿಂದ ಕೃಷ್ಣಾ ಮತ್ತು ಭೀಮಾ ನದಿಗೆ ನೀರು ಬಿಡುವಂತೆ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಬೆಳಗಾವಿ, ವಿಜಯಪುರ, ಬಾಗಲಕೋಟೆ, ಕಲಬುರಗಿ, ಯಾದಗಿರಿ ಮತ್ತು ರಾಯಚೂರು ಜಿಲ್ಲೆ ಸೇರಿದಂತೆ ಉತ್ತರ ಕರ್ನಾಟಕದ ಹಲವು ಪ್ರದೇಶಗಳಲ್ಲಿ ಮಾರ್ಚ್ ತಿಂಗಳಿನಲ್ಲಿ ಕುಡಿಯುವ ನೀರಿಗೆ ಹಾಹಕಾರ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರಿಗಾಗಿ ಕೃಷ್ಣ ನದಿಯಿಂದ ನೀರು ಬಿಡುಗಡೆ ಮಾಡುವಂತೆ ಪತ್ರದಲ್ಲಿ ಮನವಿ ಮಾಡಿದ್ದಾರೆ. ಹಿಪ್ಪರಗಿ, ಬ್ಯಾರೇಜ್ ಮತ್ತು ಸ್ಥಳೀಯ ಅಣೆಕಟ್ಟುಗಳಲ್ಲಿ ನೀರಿನ ಪ್ರಮಾಣ ಬರಿದಾಗಿದೆ. ಈ ಹಿನ್ನೆಲೆಯಲ್ಲಿ ೨ ಟಿಎಂಸಿ ನೀರನ್ನು ಕೊಯ್ನಾ ಅಣೆಕಟ್ಟೆಯಿಂದ ಕೃಷ್ಣ ನದಿಗೆ ಹಾಗೂ ಉಜ್ಜಿನಿ ಜಲಾಶಯದಿಂದ ಭೀಮಾ ನದಿಗೆ ಈ ಕೂಡಲೇ ೧ ಟಿಎಂಸಿ ನೀರು ಬಿಡುಗಡೆ ಮಾಡುವಂತೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

**<><*<><>*><>**

ಕರ್ನಾಟಕ ಆಧ್ಯಾತ್ಮ, ಸಂಗೀತ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಖ್ಯಾತಿ ಹೊಂದಿದ್ದು, ಬಸವಣ್ಣ, ಅಲ್ಲಮಪ್ರಭು, ಪುರಂದರದಾಸ, ಅಕ್ಕಮಹಾದೇವಿ ಅವರಂತಹ ಸಂತರು, ಕವಿಗಳನ್ನು ಒಳಗೊಂಡ ಮಹನೀಯರ ಕ್ಷೇತ್ರವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಣ್ಣಿಸಿದ್ದಾರೆ. ಸಿದ್ಧಗಂಗಾ ಮಠದಲ್ಲಿಂದು ಶಿವೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ೧೧೮ನೇ ಜನ್ಮ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿ, ಶಿಕ್ಷಣ ಕ್ಷೇತ್ರಕ್ಕೆ ಸಿದ್ಧಗಂಗಾಮಠ ನೀಡುತ್ತಿರುವ ಕೊಡುಗೆಗಳನ್ನು ಸ್ಮರಿಸಿದ್ದಾರೆ. ಹತ್ತು ಸಾವಿರ ವಿದ್ಯಾರ್ಥಿಗಳಿಗೆ ಅನ್ನ, ಅಕ್ಷರ, ಆಶ್ರಯ ದಾಸೋಹಗಳನ್ನು ಸಿದ್ಧಗಂಗಾ ಮಠದಲ್ಲಿ ನಡೆಸಲಾಗುತ್ತಿದ್ದು, ರಾಷ್ಟ್ರ ನಿರ್ಮಾಣಕ್ಕೆ ಅಡಿಪಾಯವಾಗಿದೆ ಎಂದು ಪ್ರತಿಪಾದಿಸಿದ್ದಾರೆ.

ಧ್ವನಿ : ರಾಜನಾಥ್ ಸಿಂಗ್ (೩೨ ಸೆಕೆಂಡ್‌ಗಳು)

ಇದೇ ವೇಳೆ ಶಿವಕುಮಾರ ಸ್ವಾಮೀಜಿಯವರಿಗೆ ಭಾರತ ರತ್ನ ಪುರಸ್ಕಾರ ನೀಡಿ ಗೌರವಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಸಿದ್ಧಗಂಗಾ ಮಠದಲ್ಲಿ ಬಡವ, ಶ್ರೀಮಂತ, ಜಾತಿ-ಧರ್ಮ, ಮೇಲು-ಕೀಳು ಎಂಬ ತಾರತಮ್ಯವಿಲ್ಲ. ಹೀಗಾಗಿ ಈ ಮಠ ಇಷ್ಟೊಂದು ಉನ್ನತ ಸ್ಥಾನಕ್ಕೆ ಬೆಳೆದಿದೆ ಎಂದು ತಿಳಿಸಿದ್ದಾರೆ.

<><*<><>*><>

"ಯಾವುದೇ ರಾಷ್ಟ್ರದ ಪ್ರಗತಿಯಲ್ಲಿ ಶಿಕ್ಷಣ ವ್ಯವಸ್ಥೆಯು ಪ್ರಮುಖ ಪಾತ್ರ ವಹಿಸುತ್ತದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ಮತ್ತು ವಿಟಿಯು ಬೆಳಗಾವಿ ವತಿಯಿಂದ ರಾಜಭವನದಲ್ಲಿ ಇಂದು ಆಯೋಜಿಸಿದ್ದ ಸಮಾರಂಭದಲ್ಲಿ ಕನ್ನಡಕ್ಕೆ ಅನುವಾದಿಸಲಾದ ಎಂಜಿನಿಯರಿಂಗ್ ಪುಸ್ತಕಗಳ ಸಂಗ್ರಹವನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.  ಜರ್ಮನಿ, ಫ್ರಾನ್ಸ್, ಜಪಾನ್, ರಷ್ಯಾ ಮತ್ತು ಚೀನಾದಂತಹ ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿ, ಶಿಕ್ಷಣ ಮಾಧ್ಯಮವು ಸಾಮಾನ್ಯವಾಗಿ ಅವರ ಮಾತೃಭಾಷೆಯಾಗಿದೆ ಎಂದು ಹೇಳಿದ್ದಾರೆ.  ಆಲ್ ಇಂಡಿಯಾ ಕೌನ್ಸಿಲ್ ಆಫ್ ಟೆಕ್ನಿಕಲ್ ಎಜುಕೇಶನ್ ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಜಂಟಿ ಸಹಯೋಗದಲ್ಲಿ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಹಂತದ ಮೊದಲ ವರ್ಷದ ಕನ್ನಡ ಭಾಷೆಗೆ ಅನುವಾದಗೊಂಡ ಪುಸ್ತಕಗಳ ಬಿಡುಗಡೆ ಗೊಳಿಸಲಾಗಿದೆ

<><*<><>*><>

ಸರ್ಕಾರ ನೀಡುತ್ತಿರುವ ಉಚಿತ ಕೊಡುಗೆಗಳಿಂದ ಆರ್ಥಿಕ ಹೊರೆಯಾಗುತ್ತಿರುವುದಾಗಿ ಬಿಜೆಪಿ ಹುಸಿ ಪ್ರಚಾರ ಮಾಡುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬಿಜೆಪಿ ನೇತೃತ್ವದ ಸರ್ಕಾರ ಟೆಂಡರ್ ಇಲ್ಲದೆ, ಬಜೆಟ್‌ನಲ್ಲಿ ಹಣಕಾಸು ಘೋಷಣೆ ಮಾಡದೆ  ಸಾವಿರಾರು ಕೋಟಿ ರೂಪಾಯಿಗಳ ಕಾಮಗಾರಿಗಳಿಗೆ ಅನುಮತಿ ನೀಡಿದೆ. ಅವುಗಳನ್ನು ಪೂರ್ಣಗೊಳಿಸುವಲ್ಲಿ ಸರ್ಕಾರಕ್ಕೆ ಆರ್ಥಿಕ ಹೊರೆಯಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಹಾಲಿನ ದರ ಹೆಚ್ಚಳವನ್ನು ಅವರು ಸಮರ್ಥಿಸಿಕೊಂಡಿದ್ದಾರೆ. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಮಾತನಾಡಿ, ಬೆಲೆ ಏರಿಕೆಯ ವೈಜ್ಞಾನಿಕ ಕಾರಣಗಳ ಬಗ್ಗೆ ಯೋಚಿಸಬೇಕಾಗುತ್ತದೆ ಹೊರತು ಅದನ್ನು ರಾಜಕೀಯವಾಗಿ ಬಳಕೆ ಮಾಡಿಕೊಂಡು ಪ್ರತಿಭಟನೆ ಮೂಲಕ ಜನರ ದಾರಿ ತಪ್ಪಿಸುವ ಕೆಲಸ ಬಿಜೆಪಿ ಮಾಡಬಾರದು ಎಂದು ತಿಳಿಸಿದ್ದಾರೆ.

<><*<><>*><>

ಬೆಲೆ ಏರಿಕೆ ಹಾಗೂ ರಾಜ್ಯ ಸರಕಾರದ ನೀತಿಗಳನ್ನು ಖಂಡಿಸಿ ನಾಳೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಅಹೋರಾತ್ರಿ ಧರಣಿ ನಡೆಸುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಕಳೆದ ೧೦ ತಿಂಗಳಿನಲ್ಲಿ ಜನರಿಗೆ ಬೆಲೆ ಏರಿಕೆಯ ಗ್ಯಾರಂಟಿಯನ್ನು ನೀಡಿದೆ. ಕಾಂಗ್ರೆಸ್ ಸರ್ಕಾರ ಹಾಲಿನ ದರ, ವಿದ್ಯುತ್ ದರ, ನೀರಿನ ದರ, ಪೆಟ್ರೋಲ್, ಡೀಸೆಲ್, ಸ್ಟಾಂಪ್ ಶುಲ್ಕ, ಮೆಟ್ರೊ ದರ ಏರಿಸುವ ಮೂಲಕ ಜನಸಾಮಾನ್ಯರಿಗೆ ಬದುಕು ಹೊರೆ ಎನಿಸುವಂತೆ ಮಾಡಿದೆ ಎಂದು ದೂರಿದ್ದಾರೆ. ಎಸ್‌ಇಪಿ, ಟಿಎಸ್‌ಪಿ ಹಣ ದುರ್ಬಳಕೆ ವಿಚಾರ ಮುಂದಿಟ್ಟು ಮೈಸೂರಿನಿಂದ ಇದೇ ೭ರಿಂದ ‘ಜನಾಕ್ರೋಶ ಯಾತ್ರೆ’ ಹಮ್ಮಿಕೊಂಡಿದ್ದು, ಪ್ರತಿ ಜಿಲ್ಲೆಗೂ ಯಾತ್ರೆ ತೆರಳಲಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೋರಾಟಕ್ಕೆ ಚಾಲನೆ ನೀಡಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ವಿಧಾನಸಭೆಯ ೧೮ ಶಾಸಕರನ್ನು ಅಮಾನತು ಮಾಡಿರುವ ವಿಧಾನಸಭಾಧ್ಯಕ್ಷರ ನಿರ್ಣಯ ಅತ್ಯಂತ ಗಂಭೀರವಾಗಿದೆ. ಚುನಾಯಿತ ಪ್ರತಿನಿಧಿಗಳು ತಮ್ಮ ಕರ್ತವ್ಯ ನಿರ್ವಹಿಸಲು ಅಡಚಣೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಈ ಆದೇಶವನ್ನು ಹಿಂಪಡೆಯಬೇಕೆಂದು ಪ್ರತಿಪಕ್ಷ ನಾಯಕ ಆರ್. ಅಶೋಕ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರಿಗೆ ಮನವಿ ಮಾಡಿದ್ದಾರೆ. ಸಭಾಧ್ಯಕ್ಷರು ತಮ್ಮ

ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಲಿದ್ದು, ಸಂವಿಧಾನದ ಮೂಲ ಆಶಯಗಳನ್ನು ಎತ್ತಿ ಹಿಡಿಯುತ್ತಾರೆ ಎಂಬ ವಿಶ್ವಾಸವಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><*<><>*><>

ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ಭಾಗವಾಗಿರುವ 'ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್' ಆವೃತ್ತಿ ಒಂದರಲ್ಲಿ ೧ ಸಾವಿರದ ೧೦೦ ಅಂತಾರಾಷ್ಟ್ರೀಯ ಸ್ಪರ್ಧಿಗಳು ಸೇರಿದಂತೆ ಒಟ್ಟು ೮೫ ಸಾವಿರ ಸ್ಪರ್ಧಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಕಠಿಣ ಆಯ್ಕೆ ಪ್ರಕ್ರಿಯೆಯ ನಂತರ ೩೨ ವಿವಿಧ ವಿಭಾಗಗಳಲ್ಲಿ ೭೫೦ಕ್ಕೂ ಹೆಚ್ಚು ಅಂತಿಮ ಸ್ಪರ್ಧಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ. ಸ್ಪರ್ಧಿಗಳು ತಮ್ಮ ಪ್ರತಿಭೆ ಮತ್ತು ಕೌಶಲ್ಯಗಳನ್ನು ಪ್ರದರ್ಶಿಸಲು ಇಲ್ಲಿ ಅವಕಾಶವಿರುತ್ತದೆ. ಆಯ ವಲಯಗಳ ಉದ್ಯಮ ನಾಯಕರೊಂದಿಗೆ ಸಂಪರ್ಕ ಅವಕಾಶಗಳನ್ನೂ ಸಹ ಒದಗಿಸಲಾಗುತ್ತದೆ. ಮಾಸ್ಟರ್ ಕ್ಲಾಸ್‌ಗಳು, ಸಂವಾದ ಮತ್ತು ಚರ್ಚೆಗಳು ಹಾಗೂ ಸಮ್ಮೇಳನಗಳ ಮೂಲಕ ಜಾಗತಿಕ ದಿಗ್ಗಜರೊಂದಿಗೆ ಕಲಿಯುವ ಅವಕಾಶವನ್ನು ಇದು ಒದಗಿಸುತ್ತದೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ಈ ಋತುವಿನ ಮೊದಲ ಐಪಿಎಲ್ ಪಂದ್ಯ ನಡೆಯಲಿದೆ. ಎಲ್ಲ ಐಪಿಎಲ್ ಪಂದ್ಯಾವಳಿಗೆ ಮೆಟ್ರೋ ಸೇವೆ ವಿಸ್ತರಿಸಲಾಗಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ. ಬೆಂಗಳೂರಿನಲ್ಲಿ ಒಟ್ಟು ೭ ಪಂದ್ಯಗಳು ನಡೆಯಲಿದ್ದು, ಮೆಟ್ರೋ ರೈಲು ಸೇವೆಯನ್ನು ರಾತ್ರಿ ೧೨.೩೦ರವರೆಗೆ ವಿಸ್ತರಿಸಲಾಗುವುದು ಎಂದು ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದೆ. ನಾಳೆ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಗುಜರಾತ್ ಟೈಟಾನ್ಸ್ ತಂಡದ ನಡುವೆ ಮೊದಲ ಪಂದ್ಯ ನಡೆಯಲಿದೆ.

<><*<><>*><>

ಕರ್ನಾಟಕದ ಇತಿಹಾಸದಲ್ಲಿ ದಾಖಲಾಗಲು ತಾಮ್ರದ ಪಟದ ಶಾಸನ ಇದೀಗ ಬೆಳಕಿಗೆ ಬಂದಿದೆ. ಈ ತಾಮ್ರದ ಪಟದ ಶಾಸನ ವಿಜಯನಗರ ರಾಜವಂಶಕ್ಕೆ ಸೇರಿದ್ದಾಗಿದ್ದು, ಈ ಶಾಸನವನ್ನು ಬೆಂಗಳೂರಿನ ಫಾಲ್ಕನ್ ಕಾಯಿನ್ಸ್ ಗ್ಯಾಲರಿಯಲ್ಲಿ ಸಂರಕ್ಷಿಸಲಾಗಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ನಿರ್ದೇಶಕ ಡಾ.ಕೆ.ಎಂ.ರೆಡ್ಡಿ, ಫಾಲ್ಕಾನ್ ಗ್ಯಾಲರಿಯ ನಿರ್ದೇಶಕ ಕೀರ್ತಿ ಪರೇಖ್ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ್ದಾರೆ. ವಿಜಯನಗರ ಸಾಮ್ರಾಜ್ಯದ ರಾಜ

ಲಾಂಛನವಾದ ವರಾಹ ಸಾಮಾನ್ಯ ಚಿತ್ರದ ಸ್ಥಳದಲ್ಲಿ ಮುದ್ರೆಯ ಚಿತ್ರದಂತೆ ಇಲ್ಲಿ ಕಂಡುಬಂದಿರುವುದು ಬಹಳ ಆಸಕ್ತಿದಾಯಕವಾಗಿದೆ.

<><*<><>*><>

ರಕ್ಷಣಾ ಲೆಕ್ಕಪತ್ರ ಇಲಾಖೆಯ ಎರಡು ದಿನಗಳ ಸಮಗ್ರ ಹಣಕಾಸು ಸಲಹೆಗಾರರ ಸಮ್ಮೇಳನ ಇದೇ ೩ ರಿಂದ ೪ ರವರೆಗೆ ಹಂಪಿಯಲ್ಲಿ ನಡೆಯಲಿದೆ. ಸಮ್ಮೇಳನವನ್ನು ಹಣಕಾಸು ಸಲಹೆಗಾರ ಐಡಿಎಎಸ್ ಅಧಿಕಾರಿ ಎಸ್.ಜಿ. ದಸ್ತಿದಾರ್ ಉದ್ಘಾಟಿಸಲಿದ್ದಾರೆ. ಭೂಸೇನೆ, ನೌಕಾಪಡೆ, ವಾಯುಪಡೆ, ಕರಾವಳಿ ಕಾವಲು ಪಡೆ, ಗಡಿ ರಸ್ತೆಗಳು, ಸಿಎಸ್, ಡಿಡಿಆರ್‌ಡಿಒ ಮತ್ತು ಎಂಇಎಸ್ ಗೆ ಸಮಗ್ರ ಹಣಕಾಸು ಸಲಹೆಗಾರರಾಗಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳು ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

<u>ಇನ್ನು ಹವಾವರ್ತಮಾನ,</u>

ರಾಜ್ಯದ ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದೆ. ಇಂದು ಬೆಳಗಾವಿ, ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಉತ್ತರಕನ್ನಡ, ಉಡುಪಿ, ದಕ್ಷಿಣಕನ್ನಡ, ಕೊಡಗು, ಶಿವಮೊಗ್ಗ ಸೇರಿದಂತೆ ಕೆಲ ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಭಾಗಶಃ ಮೋಡಕವಿದ ವಾತಾವರಣ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>